ಇ) ಈ ಸಂಸ್ಥೆಗೆ ಸ್ಥಳೀಯ ಶಾಸಕರೇ ಭೂಮಿಯನ್ನು ದಾನವಾಗಿ ನೀಡಿದ್ದು ಕಟ್ಟಡ ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಇಂಡಿ ತಾಲ್ಲೂಕಿನ ಝಳಕಿ ಗ್ರಾಮದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯನ್ನು 2009ರಲ್ಲಿ ಪ್ರಾರಂಭಿಸಲಾಯಿತು.

ಆ)ಮಂಜೂರಾದ ಶಿಕ್ಷಕರ ಹುದ್ದೆಗಳ ಸಂಖ್ಯೆ 31, 22 ಪೂರ್ಣಕಾಲಿಕ ಉಪನ್ಯಾಸಕರು ಹಾಗೂ 05 ಅರೆಕಾಲಿಕ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿರುತ್ತಾರೆ.

ಇ) ಅನುದಾನದ ಲಭ್ಯತೆಯನುಸಾರ ಕ್ರಮ ಕೈಗೊಳ್ಳಲಾಗುವುದು.

ಸಮುದಾಯ ಆರೋಗ್ಯ ಕೇಂದ್ರಗಳ ಕಟ್ಟಡಗಳು
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 20 : (37)

ಶ್ರೀ ಕುಮಾರ ಸ್ವಾಮಿ ಕೆ.ಜಿ. (ಶಿವಮೊಗ್ಗ ಗ್ರಾಮಾಂತರ)

ಅ) ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಹೊಳೆಹೊನ್ನೂರು ಸಮುದಾಯ ಆರೋಗ್ಯ ಕೇಂದ್ರ ಕಟ್ಟಡ ಶಿಥಿಲಗೊಂಡು ಮಳೆಗಾಲದಲ್ಲಿ ಸೋರುತ್ತಿದ್ದು ಹೊಸ ಕಟ್ಟಡ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ)ಇಲಾಖೆಯ ಅನುಮೋದನೆಗಾಗಿ ಅಂದಾಜು ಪಟ್ಟಿ ಸಹಿತ ತಾಂತ್ರಿಕ ವರದಿಯನ್ನು ಸಲ್ಲಿಸಿದ್ದು, ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಮತ್ತು ಸುಧಾರಣೆ ಯೋಜನೆಯಿಂದ ಕಾಮಗಾರಿ ಪ್ರಾರಂಭಿಸಲು ಏನು ಕ್ರಮ ವಹಿಸಲಾಗಿದೆ;

ಇ) ಹೊಳಲೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಈಗಾಗಲೇ ಉನ್ನತೀಕರಿಸಿದ್ದು ಸಮುದಾಯ ಆರೋಗ್ಯ ಕೇಂದ್ರ ಮಟ್ಟಕ್ಕೆ ಸಮನಾಗಿ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸದೇ ಇರಲು ಕಾರಣವೇನು;

ಸಂಬಂಧಪಟ್ಟ ಇಂಜೀನಿಯರ್‌ಗಳು ಕಾಮಗಾರಿ ಸ್ಥಗಿತಗೊಳಿಸಲು ತಾಂತ್ರಿಕ ಹಾಗೂ ಆಡಳಿತಾತ್ಮಕ ಕಾರಣಗಳೇನು (ವಿವರ ಒದಗಿಸುವುದು)?

ಶ್ರೀ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು

ಆ) ಹೊಳೆಹೆನ್ನೂರು ಸಮುದಾಯ ಆರೋಗ್ಯ ಕೇಂದ್ರ ಕಟ್ಟಡದ ಭಾಗಶಃ ಕಾಮಗಾರಿಯನ್ನು ಜಿಲ್ಲಾ ಪಂಚಾಯತ್‌ನಿಂದ ನಿರ್ವಹಿಸಿ ಸ್ಥಗಿತಗೊಳಿಸಲಾಗಿದೆ. ಸದರಿ ಕಟ್ಟಡವನ್ನು ಪೂರ್ಣಗೊಳಿಸಲು ಅನುದಾನವನ್ನು ಒದಗಿಸುವಂತೆ ಕರ್ನಾಟಕ ಆರೋಗ್ಯ ಪದ್ಧತಿಗಳ ಅಭಿವೃದ್ಧಿ ಮತ್ತು ಸುಧಾರಣಾ ಯೋಜನೆಯನ್ನು ಕೋರಲಾಗಿತ್ತು. ಸದರಿ ಕಾಮಗಾರಿ ಈ ಮುಂಚೆ, ಜಿಲ್ಲಾ ಪಂಚಾಯತ್‌ನಿಂದ ಬಾಗಶಃ ನಿರ್ವಹಿಸಿ ಸ್ಥಗಿತಗೊಳಿಸಲಾಗಿದೆ. ಸದರಿ ಕಟ್ಟಡ ಕಾಮಗಾರಿಯನ್ನು ಕರ್ನಾಟಕ ಆರೋಗ್ಯ ಪದ್ಧತಿಗಳ ಅಭಿವೃದ್ಧಿ ಮತ್ತು ಸುಧಾರಣಾ ಯೋಜನೆಯಿಂದ ಮುಂದುವರೆಸುವ ಮುನ್ನ ಈಗಾಗಲೇ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಅನುಮೋದನೆಯಾಗಿರುವ ಸಮುದಾಯ–ಆರೋಗ್ಯ ಕೇಂದ್ರಗಳ ಕಟ್ಟಡಗಳ ಮಾದರಿ ನಕ್ಷೆ ಪ್ರಕಾರ ನಿರ್ಮಿಸಬೇಕಿದೆ. ಅಲ್ಲದೆ, ಜಿಲ್ಲಾ ಪಂಚಾಯತ್‌ನಿಂದ ನಿರ್ಮಿಸಿರುವ ಕಟ್ಟಡ ಕಾಮಗಾರಿಯನ್ನು ಮುಂದುವರೆಸುವ ಮುನ್ನ, ಈಗ ನಿರ್ವಹಿಸಿರುವ ಕಾಮಗಾರಿ ತೃಪ್ತಿಕರವಾಗಿದೆಯೇ, ಇಲ್ಲವೇ ಎಂಬುದನ್ನು ದೃಢೀಕರಿಸಿಕೊಂಡು, ತದನಂತರವಷ್ಟೆ ಸದರಿ ಕಾಮಗಾರಿಯನ್ನು ಮುಂದುವರೆಸಬೇಕಿದ್ದು, ಸದರಿ ಕಾಮಗಾರಿಯನ್ನು ಅನುದಾನದ ಲಭ್ಯತೆ ಮೇರೆಗೆ ಕೈಗೊಳ್ಳಲಾಗುವುದ.

ಇ)ಶಿವಮೊಗ್ಗ ಜಿಲ್ಲೆಯ ಹೊಳಲೂರು ಗ್ರಾಮದಲ್ಲಿ ಸಮುದಾಯ ಆರೋಗ್ಯ ಕೇಂದ್ರ ಕಟ್ಟಡದ ಕಾಮಗಾರಿಯನ್ನು ಕೈಗೊಳ್ಳಲು ಕರ್ನಾಟಕ ಸರ್ಕಾರವು ಅಂದಾಜು ಪಟ್ಟಿಯ ಮೊತ್ತ ರೂ. 252.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಈ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಮೆ:ಕೆ.ಬಿ.ಆರ್. ಇನ್‌ಫ್ರಾಟಿಕ್ ಲಿ., ಬೆಂಗಳೂರು ರವರಿಗೆ

ರೂ. 249.5.00 ಲಕ್ಷಗಳಿಗೆ ಕಾರ್ಯಾದೇಶವನ್ನು ದಿನಾಂಕ: 30–5–2012ರಲ್ಲಿ ನೀಡಲಾಗಿರುತ್ತದೆ. ಈ ಕಾಮಗಾರಿಯನ್ನು ಪೂರ್ಣಗೊಳಿಸಲು 18 ತಿಂಗಳ ಕಾಲಾವಕಾಶವು (ಮಳೆಗಾಲವು ಸೇರಿದಂತೆ) ನೀಡಲಾಗಿರುತ್ತದೆ. ಈ ಕಾಮಗಾರಿಯು ಪ್ರಾರಂಭಗೊಂಡು, ವಾರ್ಡ್ ಬ್ಲಾಕ್ ಕಟ್ಟಡವು ಪಾಯದ ಹಂತದಲ್ಲಿದೆ ಹಾಗೂ ಒ.ಪಿ.ಡಿ ಬ್ಲಾಕ್‌ನ ಇಟ್ಟಿಗೆ ಕಟ್ಟಡವು ಲಿಂಟಲ್ ಮಟ್ಟದಲ್ಲಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಶೈಕ್ಷಣಿಕ ಸುಧಾರಣೆ ಕ್ರಮ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 8 : (44)

ಶ್ರೀ ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ಜಿಲ್ಲೆಯು ರಾಜ್ಯದ ಶೈಕ್ಷಣಿಕ ಸೂಚ್ಯಂಕದಲ್ಲಿ ಅತ್ಯಂತ ಕೆಳಸರದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ)ಬಂದಿದ್ದಲ್ಲಿ ಜಿಲ್ಲೆಯನ್ನು ಶಿಕ್ಷಣದ ಕ್ಷೇತ್ರದಲ್ಲಿ ಸುಧಾರಣೆಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

ಇ) ಜಿಲ್ಲೆಯಲ್ಲಿ ಪ್ರಾಥಮಿಕ ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳಿಗೆ ಸೂಕ್ತ ಶಿಕ್ಷಣ ದೊರೆಯದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಈ ಕೊರೆತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಜಿಲ್ಲೆಯನ್ನು ಶಿಕ್ಷಣ ಕ್ಷೇತ್ರದಲ್ಲಿ ಸುಧಾರಣೆಗೊಳಿಸಲು ಸರ್ವ ಶಿಕ್ಷಣ ಅಭಿಯಾನದಡಿ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗಿದೆ.